# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 932 ಗ್ರಾಪಂಅ 2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 09-01-2015.

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಸ್ಥಿರಾಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ 9, ಮತ್ತು 11ಎ ಗಳನ್ನು ಗ್ರಾಮ ಪಂಚಾಯಿತಿಗಳು ವಿತರಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 ದಿನಾಂಕ: 14-06-2013.
2. ಸರ್ಕಾರದ ಸೇರ್ಪಡೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 ದಿನಾಂಕ: 15-06-2013.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 (ಭಾಗ-6) ದಿನಾಂಕ:21-01-2014.
4. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 (ಭಾಗ-6) ದಿನಾಂಕ:03-02-2014.
5. ಕಂದಾಯ ಇಲಾಖೆಯ ತಿದ್ದೋಲೆ ಸಂಖ್ಯೆ: ಕಂಇ 6 ಮುನೋಮು 2013 ದಿನಾಂಕ:23-04-2014.

* * * *

ಉಲ್ಲೇಖ (1) ರಿಂದ (3) ರವರೆಗಿನ ಸರ್ಕಾರದ ಅಧಿಸೂಚನೆಗಳಲ್ಲಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ (ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ಕ್ಕೆ ತಿದ್ದುಪಡಿ ತಂದು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ 9, 11ಎ ಮತ್ತು 11ಬಿ ಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರ ಡಿಜಿಟಲ್ ಸಹಿಯ ಮೂಲಕ ವಿತರಿಸಲು ತಿಳಿಸಲಾಗಿದೆ.

ಉಲ್ಲೇಖ (4) ರ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ 9, 11ಎ ಮತ್ತು 11ಬಿ ಗಳನ್ನು ವಿತರಿಸುವಾಗ ಅನುಸರಿಸಬೇಕಾದ ಕಾರ್ಯವಿಧಾನದ ಬಗ್ಗೆ ಸವಿವರವಾಗಿ ತಿಳಿಸಲಾಗಿದೆ. ಉಲ್ಲೇಖ (5) ರ ಕಂದಾಯ ಇಲಾಖೆಯ ತಿದ್ದೋಲೆಯಲ್ಲಿ ಉಪನೋಂದಣಾಧಿಕಾರಿಗಳ ಕಛೇರಿಯಲ್ಲಿ ನೋಂದಾಯಿಸಲು ಗ್ರಾಮ ಪಂಚಾಯತಿ ಸಕ್ಷಮ ಪ್ರಾಧಿಕಾರಿಯಿಂದ ಡಿಜಿಟಲ್ ಸಹಿ ಮಾಡಿ ನೀಡಲ್ಪಟ್ಟಿರುವ ಗಣಕೀಕೃತ ನಮೂನೆ 9, ಮತ್ತು 11ಎ ಅಥವಾ ನಮೂನೆ 11ಬಿ ಗಳನ್ನು ಪಡೆಯುವಂತೆ ತಿಳಿಸಲಾಗಿದೆ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, (BDA) ಕರ್ನಾಟಕ ಗೃಹ ಮಂಡಳಿ,(KHB) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ,(KIADB) ಸ್ಥಳೀಯ ಅಭಿವೃದ್ಧಿ ಪ್ರಾಧಿಕಾರಗಳು(LDA`s) ಮತ್ತು ಇನ್ನಿತರೆ ಸಂಸ್ಥೆಗಳು ಬರೆದುಕೊಡುವ ಆಸ್ತಿಗಳ ಹಸ್ತಾಂತರ ಪತ್ರಗಳಲ್ಲಿ ಕಾಣಿಸುವ ಸ್ವತ್ತುಗಳು ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, (BDA) ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, (BMRDA) ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನಾ ಪ್ರಾಧಿಕಾರ (BIAAPA)

ಮತ್ತು ಇನ್ನಿತರೆ ಸ್ಥಳೀಯ ಸಕ್ಷಮ ಯೋಜನಾ ಪ್ರಾಧಿಕಾರಗಳು (LPA`s) ಅನುಮೋದಿಸಿದ ಬಡಾವಣೆಗಳಲ್ಲಿ ಬರುವ ಆಸ್ತಿಗಳಿಗೆ ತೆರಿಗೆ ನಿರ್ಧರಣೆ ಪಟ್ಟಿ ನೀಡುವಲ್ಲಿ ಸ್ಪಷ್ಟೀಕರಣದ ಅಗತ್ಯವಿರುವುದು ಕಂಡು ಬಂದಿದೆ.

ಆದ್ದರಿಂದ ಈ ಮೂಲಕ ಮೇಲ್ಕಂಡ ಪ್ರಾಧಿಕಾರಗಳು / ಸಂಸ್ಥೆಗಳು ಅನುಮೋದಿಸಿದ ಬಡಾವಣೆಗಳಲ್ಲಿ ಬರುವ ಆಸ್ತಿಗಳಿಗೆ ಅವರು ನೀಡುವ 1) ಅನುಮೋದಿತ ಬಡಾವಣೆ ನಕ್ಷೆ ಮತ್ತು 2) ನಿವೇಶನ ಮಾಲೀಕರ ಪಟ್ಟಿಯನ್ನು ಪಡೆದು ಅದರಂತೆ ಸದರಿ ನಿವೇಶನಗಳ ಅರ್ಜಿ ಕೊಟ್ಟ ಮಾಲೀಕರಿಂದ ದಾಖಲೆಗಳನ್ನು ಪಡೆದು ತೆರಿಗೆ ನಿರ್ಧರಣೆ ಪಟ್ಟಿ ಮಾಡುವುದರ ಜೊತೆಗೆ ಅಂತಹ ಬಡಾವಣೆಗಳಿಗೆ ಒಟ್ಟಾರೆಯಾಗಿ ಸದರಿ ಪ್ರಾಧಿಕಾರಗಳಿಂದ / ಸಂಸ್ಥೆಗಳಿಂದ ಅನುಮೋದಿತ ನಕ್ಷೆ ಮತ್ತು ಮಾಲೀಕರ ಪಟ್ಟಿ ಪಡೆದು ಒಟ್ಟಿಗೆ ತೆರಿಗೆ ನಿರ್ಧರಣೆ ಪಟ್ಟಿ ಮಾಡಿಸಲು ಸಂಬಂಧಿಸಿದ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಇ-ಸ್ವತ್ತು ತಂತ್ರಾಂಶದಲ್ಲಿ ಅಳವಡಿಸಿಕೊಂಡು ಡಿಜಿಟಲ್ ಸಹಿಯೊಂದಿಗೆ ನಮೂನೆ 9 ಮತ್ತು 11ಎ (ತೆರಿಗೆ ನಿರ್ಧರಣೆ ಪಟ್ಟಿ) ವಿತರಿಸತಕ್ಕದ್ದು. ಸಾರ್ವಜನಿಕರು ದಸ್ತಾವೇಜುಗಳನ್ನು ಉಪನೊಂದಾಣಾಧಿಕಾರಿಗಳ ಕಛೇರಿಯಲ್ಲಿ ನೊಂದಾಯಿಸಿಕೊಳ್ಳಬಹುದಾಗಿದೆ.

ಈ ಮೇಲ್ಕಂಡಂತೆ ಸುತ್ತೋಲೆಯ ಅಂಶಗಳನ್ನು ಪರಿಪಾಲಿಸಬೇಕೆಂದು ಈ ಮೂಲಕ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳಿಗೆ ಸೂಚಿಸಿದೆ.

9/6/15

(ಕೆ. ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1) ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3) ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಅಧ್ಯಕ್ಷರು/ಪಂಚಾಯಿತಿ ಅಭಿವೃದ್ಧಿ ಅಧಿಕಾರಿ/ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು.
4) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ,
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿಗಳು, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ, ಬೆಂಗಳೂರು.
4) ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು.
5) ಗೃಹ ಆಯುಕ್ತರು, ಕರ್ನಾಟಕ ಗೃಹ ಮಂಡಳಿ, ಬೆಂಗಳೂರು.
6) ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ., ಬೆಂಗಳೂರು.
7) ಹೆಚ್ಚುವರಿ ಪ್ರತಿ.